**<u>ದಿಃ 16.02.2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಲಾಯಿತು.</u>**

**<u>ಮುಖ್ಯ ವಿಚಾರಣೆ :</u>** ಶ್ರೀ.ಟಿ.ಹೆಚ್.ವಿ.ನ್ಯಾಯವಾದಿಗಳಿಂದಃ-

ನಾನು ನನ್ನ ಮುಖ್ಯ ವಿಚಾರಣೆಗೆ ಅನುಗುಣವಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಸಂಗತಿಗಳು ಸತ್ಯವಾಗಿರುತ್ತವೆ. ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿರುತ್ತೇನೆ.

ಸಾಕ್ಷಿಯು ದಾವ ಸ್ವತ್ತಿಗೆ ಸಂಬಂಧಿಸಿದ ದಿಃ30.11.1971 ರಲ್ಲಿ ಆದ ನೊಂದಾಯಿತ ದಾನ ಪತ್ರದ ದೃಡೀಕೃತ ದಾಖಲೆಯನ್ನು ಹಾಜರುಪಡಿಸುತ್ತಿದ್ದು, ಇದರ ಮೂಲ ಪ್ರತಿಯು ಕಳೆದುಹೋಗಿದ್ದು, ಸದರಿ ದೃಡೀಕೃತ ದಾಖಲೆಯನ್ನು ಹಾಜರುಪಡಿಸಿರುತ್ತೇವೆ ಎಂದು ಸಾಕ್ಷಿಯು ಮುಂದುವರಿದು ನುಡಿದಿರುತ್ತಾರೆ. ಸದರಿ ದಾಖಲೆಯನ್ನು ಗುರುತಿಸುವಿಕೆಗಾಗಿ ನಿ.ಪಿ.1 ಎಂದು, ಸಾಕ್ಷಿಯು ದಾವ ಸ್ವತ್ತಿಗೆ ಸಂಬಂಧಿಸಿದ ದಿಃ09.10.1998 ರ ನೊಂದಾಯಿತ ಕ್ರಯ ಪತ್ರದ ಮೂಲ ದಾಖಲೆಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ. 2 ಎಂದು, ಸಾಕ್ಷಿಯು ದಾವ ಸ್ವತ್ತಿಗೆ ಸಂಬಂಧಿಸಿದ 2 ಎಮ್ ಆರ್ ವಹಿಯ ದೃಡೀಕೃತ ದಾಖಲೆಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ. 3 ಮತ್ತು 4 ಎಂದು, ಸಾಕ್ಷಿಯು ದಾವ ಸ್ವತ್ತಿಗೆ ಸಂಬಂಧಿಸಿದ 3 ಗಣಕೀಕೃತ ಪಹಣಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ. 5 ರಿಂದ 7 ಎಂದು, ಸಾಕ್ಷಿಯು ತನ್ನ ಕುಟುಂಬಕ್ಕೆ ಸಂಬಂಧಿಸಿದ ವಂಶವೃಕ್ಷವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.8 ಎಂದು, ಮತ್ತು ಪ್ರತಿವಾದಿಯರು ದಾವ ಸ್ವತ್ತಿಗೆ ತೊಂದರೆ ಕೊಟ್ಟ ಬಗ್ಗೆ ಸಾಕ್ಷಿಯು ದೂರು ನೀಡಿದ್ದು, ಅದರ ಪೋಲಿಸ್ ಸ್ವಿಕೃತಿಯ ದಾಖಲೆಯನ್ನು ಹಾಜರುಪಡಿಸುತ್ತಿದ್ದು, ಅದನ್ನು ನಿ.ಪಿ. 9 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

ಸಿವಿಲ್ ನ್ಯಾಯಾಧೀಶರು, ಜಗಳೂರು